## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ, ಇವರ ವಿರುದ್ಧದ ನಡವಳಿ ಕುರಿತು-ಆದೇಶ.

**ಓದಲಾಗಿದೆ:** ಮಾನ್ಯ ನಿಬಂಧಕರು, ಮಾನ್ಯ ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂಖ್ಯೆ:D.O.No.Compt/Uplok/BD-1509/2016/DRE-1, ದಿನಾಂಕ:17-06-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 13-06-2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ಎನ್.ಎಸ್.ನಾಗರಾಜರಾವ್, ವಕೀಲರು, ಶ್ರೀ ಹರಿ ಕೃಪ, ಲಾಸ್ಟ್ ಕ್ರಾಸ್, ಟ್ಯಾಂಕ್ ಬಂಡ್ ರಸ್ತೆ, ಚಿಂತಾಮಣಿ, ಚಿಕ್ಕಬಳ್ಳಾಪುರ ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ ಎಂದು ತಿಳಿಸಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ಹಿರೇಬಿದನೂರು ಗ್ರಾಮದ ಸ.ನಂ.203/14 ಮತ್ತು 203/22 ರಲ್ಲಿ 2.25 ಎಕರೆ ವಿಸ್ತೀರ್ಣಕ್ಕೆ ಕಂದಾಯ ಇಲಾಖೆಯಿಂದ ನಿಯಮಾನುಸಾರ ಭೂ ಪರಿವರ್ತನೆ ಆದೇಶ ಪಡೆದು, ವಸತಿ ಯೋಜನೆಗೆ ನಿವೇಶನಗಳನ್ನು ನೀಲಿ ನಕ್ಷೆಯ ಮೂಲಕ ಸಹಾಯಕ ನಿರ್ದೇಶಕರು ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರ ಇವರಿಂದ ಅನುಮೋದನೆ ಪಡೆದು, ಮೂಲಭೂತ ಸೌಕರ್ಯಕ್ಕೆ ಮೀಸಲಿಟ್ಟ ಭೂಮಿಯನ್ನು ಸೇರಿಸಿಕೊಂಡು ನಕಲಿ ನಕ್ಷೆಯನ್ನು ತಯಾರಿಸಿ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ಸರ್ಕಾರದ ನಿಯಮಾವಳಿಗಳಿಗೆ ವಿರುದ್ಧವಾಗಿ ಠರಾವುಗೊಳಿಸಿ ಸಕಲಿ ನಕ್ಷೆಗೆ ಎದುರುದಾರರು ಅನುಮೋದನೆ ಮಾಡಿರುತ್ತಾರೆ. ಇದರಿಂದ ಸರ್ಕಾರಕ್ಕೆ ಮತ್ತು ಗ್ರಾಮ ಪಂಚಾಯತಿಗೆ ಆರ್ಥಿಕ ನಷ್ಟ ಉಂಟುಮಾಡಿ ಕರ್ತವ್ಯಲೋಪ ಎಸಗಿರುತ್ತಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

ದೂರುದಾರರ ದೂರಿನ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ ವಸತಿ ವಿನ್ಯಾಸದ ನಕ್ಷೆಗಾಗಿ ದಾಖಲಾತಿಗಳೊಂದಿಗೆ ಸಲ್ಲಿಸಲಾಗುವ ಅರ್ಜಿಯನ್ನು ಪಂಚಾಯತಿಯಲ್ಲಿ ಸ್ವೀಕರಿಸಿ, ಪರಿಶೀಲಿಸಿ ಸದರಿ ಅರ್ಜಿಯನ್ನು ಗ್ರಾಮ ಪಂಚಾಯತ್ ಸಭೆಯಲ್ಲಿ ಇಡಲಾಗುತ್ತದೆ. ಗ್ರಾಮಪಂಚಾಯತಿಯ ಸದಸ್ಯರು ಸಭೆಯಲ್ಲಿ ನಕ್ಷೆ ಇರುವ ಬಗ್ಗೆ ಅನುಮೋದಿಸಿದ ನಂತರ ಗ್ರಾಮಪಂಚಾಯತಿ ಠರಾವಿನ ಆಧಾರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರ ಇವರ ಅನುಮೊದನೆಗಾಗಿ ಕಳುಹಿಸಿಕೊಡಲಾಗುತ್ತದೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ನಕ್ಷೆಯನ್ನು ಅನುಮೋದನೆ ಮಾಡಲು ಯಾವುದೇ ಅಧಿಕಾರವಿಲ್ಲ. ದೂರುದಾರರು ತನ್ನ ದೂರಿನಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದ ಅನುಮೋದನೆಯ ನಂತರ ಗ್ರಾಮಪಂಚಾಯತಿಯ ಅಧ್ಯಕ್ಷರ ಜೊತೆ ಸೇರಿ ಸರಸ್ವತಮ್ಮ ಮತ್ತು ಲಕ್ಷ್ಮೀದೇವಮ್ಮ ಇವರ ಪರವಾಗಿ ಪಂಚಾಯತ್ ಠರಾವನ್ನು ಮಾಡಿ ಮೂಲಭೂತ ಸೌಕರ್ಯಕ್ಕೆ ಮೀಸಲಿಟ್ಟ ಭೂಮಿಯನ್ನು ಕೂಡ ಮನೆ ನಿವೇಶನಕ್ಕೆ ಸೇರಿಸಿಕೊಳ್ಳಲಾಗಿದೆ ಎಂದು ಸುಳ್ಳು ದೂರನ್ನು ನೀಡಿರುತ್ತಾರೆ. ಸರಸ್ವತಮ್ಮ ಮತ್ತು ಲಕ್ಷ್ಮೀದೇವಮ್ಮ ಎಂಬುವರು ದಿ:05-02-2014 ರಂದು ಅರ್ಜಿಯನ್ನು ಸಲ್ಲಿಸಿದ್ದು, ಆ ಬಗ್ಗೆ ಸದರಿ ಅರ್ಜಿಯನ್ನು ದಿ:13-02-2014 ರ ಸಭೆಯಲ್ಲಿ ಮಂಡಿಸಲಾಗಿದೆ. ಸದರಿ ನಕ್ಷೆಯು ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದಲ್ಲಿ ದಿ:28-02-2014 ರಂದು ಅನುಮೋದನೆಗೊಂಡಿರುತ್ತದೆ. ಆದ್ದರಿಂದ, ಯಾವುದೇ ನಿಯಮಗಳ ಉಲ್ಲಂಘನೆಯಾಗಿರುವುದಿಲ್ಲ ಎಂದು ಹೇಳಿರುತ್ತಾರೆ.

ಎದುರುದಾರರು ಆಕ್ಷೇಪಣೆಯ ಮೇಲೆ ದೂರುದಾರರು ಪ್ರತ್ಯುತ್ತರವನ್ನು ಸಲ್ಲಿಸಿದ್ದು, ಪ್ರತ್ಯುತ್ತರದಲ್ಲಿ ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಯನ್ನು ಪರಿಶೀಲಿಸಿದಾಗ, ಗ್ರಾಮ ಪಂಚಾಯತಿನ ಆಡಳಿತ ಮಂಡಳಿಯವರು ಪ್ರಾಧಿಕಾರದ ವಿನ್ಯಾಸ ಪತ್ರದ ಮುಂಚಿತವಾಗಿ ಕರಡು ನಕ್ಷೆಗೆ ಅಧ್ಯಕ್ಷ/ಪಿ.ಡಿ.ಓ/ಕಾರ್ಯದರ್ಶಿಗಳು

..2

ಅನುಮೋದಿಸಿರುವುದು ದಾಖಲೆಗಳಲ್ಲಿ ಕಂಡುಬಂದಿರುತ್ತದೆ. ಪುನಃ ಸದರಿ ಇದೇ ವಿವಾದಿತ ಸ್ವತ್ತಿಗೆ ಪ್ರಾಧಿಕಾರದಿಂದ ಅನುಮೋದಿಸಿರುವ ವಿನ್ಯಾಸದ ನಕ್ಷೆಗೆ ದಿನಾಂಕ:28-02-2014 ರ ಅನುಮೋದನೆಯನ್ನು ಗ್ರಾಮ ಪಂಚಾಯತಿ ಆಡಳಿತ ಮಂಡಳಿಯಿಂದ ಅನುಮೋದಿಸಿರುತ್ತಾರೆ. ಆದಕಾರಣ, ಈ ಹಂತದಲ್ಲಿ ಪಿ.ಡಿ.ಓ/ಕಾರ್ಯದರ್ಶಿಗಳು ಅಸಹಾಯಕರಾಗಿರುತ್ತಾರೆಂದು ಕಂಡುಬಂದಿರುತ್ತದೆ. ಸದರಿ ಪ್ರಕರಣದಲ್ಲಿ ಜಿಲ್ಲಾಧಿಕಾರಿಗಳ ಆದೇಶ ಪಡೆದ ನಂತರ ಷರತ್ತಗಳನ್ನು ಪೂರ್ಣಗೊಳಿಸದೆ ಖಾಸಗಿ ನೀಲಿ ನಕ್ಷಗೆ ಅನುಮೋದಿಸಿರುವುದು ಮತ್ತು ಪ್ರಾಧಿಕಾರದಿಂದ ಅನುಮೋದಿಸಿರುವ ವಿನ್ಯಾಸಕ್ಕೂ ಸಹ ಗ್ರಾಮ ಪಂಚಾಯತಿಯಲ್ಲಿ ಅನುಮೋದಿಸಿರುವುದು ದೃಢಪಟ್ಟಿರುತ್ತದೆ. ಆದಕಾರಣ ಗ್ರಾಮ ಪಂಚಾಯತಿಯ ಆಡಳಿತ ಮಂಡಳಿಯವರು 2 ನಕ್ಷೆಗಳಿಗೆ ವಿವಿಧ ದಿನಾಂಕಗಳಲ್ಲಿ ಅನುಮೋದಿಸಿರುವುದು ಕರ್ತವ್ಯಲೋಪ ಉಂಟುಮಾಡಿರುವುದು ದೃಢಪಟ್ಟಿರುತ್ತದೆ. ಗ್ರಾಮ ಪಂಚಾಯತಿಯ ಆಡಳಿತ ಮಂಡಳಿಯವರು ದಿ:13-02-2014 ರಲ್ಲಿ ಕ್ರ.ಸಂ.13 ರಲ್ಲಿ ಭೂಪರಿವರ್ತನಾ ಆದೇಶದ ಸ್ವತ್ತಿಗೆ ಠರಾವುಗೊಳಿಸಿ ಅನುಮೋದಿಸಿರುವುದು ಕಾನೂನುಬದ್ಧವಾಗಿರುವುದಿಲ್ಲವೆಂದು ದೃಢಪಟ್ಟಿರುತ್ತದೆ. ಪಿಡಿಓ/ಕಾರ್ಯದರ್ಶಿಗಳು ತಮ್ಮ ಆಕ್ಷೇಪಣೆಯಲ್ಲಿ ಸಲ್ಲಿಸಿರುವ ಅಂಶಗಳಿಂದ ಜಿಲ್ಲಾಧಿಕಾರಿಗಳ ಭೂ ಪರಿವರ್ತನಾ ಆದೇಶ ನೀಡಿರುವಂತೆ ಷರತ್ತುಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯತಿಯ ಆಡಳಿತ ಮಂಡಳಿಯವರು ಅನುಮೋದಿಸಿರುವುದು ಸಮಂಜಸವಾಗಿರುವುದಿಲ್ಲ. ಪ್ರಾಧಿಕಾರದಿಂದ ವಾಸದ ಮನೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ವಿಸ್ತೀರ್ಣ ಶೇ.52.89 ಅನುಮೋದಿತ ನಕ್ಷೆಯಲ್ಲಿ ದಾಖಲಿಸಿದ್ದು, ಗ್ರಾಮ ಪಂಚಾಯತಿಯ ಆಡಳಿತ ಮಂಡಳಿ ಅನುಮೋದಿಸಿರುವ ನಕ್ಷೆಯಲ್ಲಿ ಶೇ.54.99 ವಿಸ್ತೀರ್ಣಕ್ಕೆ ಅನುಮೋದಿಸಲಾಗಿದೆ. ಆದ ಕಾರಣ ಈ ವ್ಯತ್ಯಾಸಕ್ಕೆ ಗ್ರಾಮಪಂಚಾಯತಿಯ ಅಧ್ಯಕ್ಷರು ಕಾರಣಕರ್ತರಾಗಿರುತ್ತಾರೆಂದು ಹೇಳಿರುತ್ತಾರೆ.

ದೂರುದಾರರ ಪ್ರತ್ಯುತ್ತರವನ್ನು ಪರಿಶೀಲಿಸಿದಾಗ, ಜಿಲ್ಲಾಧಿಕಾರಿಗಳ ಭೂಪರಿವರ್ತನಾ ಆದೇಶದ ಷರತ್ತುಗಳನ್ನು ಉಲ್ಲಂಘಿಸಲಾಗಿದೆ. ಗ್ರಾಮ ಪಂಚಾಯತಿಯ ಆಡಳಿತ ಮಂಡಳಿಯವರು ಅನುಮೋದಿಸಿರುವ ನಕ್ಷೆಗಳಿಗೆ ಒತ್ತಡದಿಂದ ಪಿಡಿಓ ಸಹಿ ಮಾಡಿರುತ್ತಾರೆ. ಪ್ರಾಧಿಕಾರದಿಂದ ಅನುಮೋದಿತ ನಕ್ಷೆಯಲ್ಲಿ ಹಾಗೂ ಗ್ರಾಮಪಂಚಾಯತಿಯವರು ಅನುಮೋದಿಸಿರುವ ನಕ್ಷೆಯಲ್ಲಿ ವಿಸ್ತೀರ್ಣ ವ್ಯತ್ಯಾಸ ಕಂಡುಬಂದಿರುತ್ತದೆಯೆಂದು ಹೇಳಿರುವ ಕಾರಣ ಸದರಿ ವಿಚಾರಗಳ ಬಗ್ಗೆ ದಾಖಲಾತಿಗಳನ್ನು ಪರಿಶೀಲಿಸುವ ಸಲುವಾಗಿ ಮೂಲ ದಾಖಲಾತಿಗಳ ಸಮೇತ ಗೌರವಾನ್ವಿತರ ಮುಂದೆ ಹಾಜರಾಗುವಂತೆ ಎದುರುದಾರರಿಗೆ ಆದೇಶಿಸಲಾಗಿತ್ತು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮಪಂಚಾಯತಿ, ಗೌರಿಬಿದನೂರು ತಾಲ್ಲೂಕು ಇವರು ಹಾಜರಾಗಿ ದಾಖಲಾತಿಗಳ ಪ್ರತಿಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ಪರಿಶೀಲಿಸಿದಾಗ ದಿ:15-07-2013 ರಂದು ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಗೌರಿಬಿದನೂರು ತಾಲ್ಲೂಕು, ಕಸಬಾ ಹೋಬಳಿ, ಹಿರೇಬಿದನೂರು ಗ್ರಾಮದ ಸ.ನಂ.203/14 ರಲ್ಲಿ 0.25 ಗುಂಟೆ ಮತ್ತು ಸ.ನಂ.203/22 ರಲ್ಲಿ ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಸತಿ ಉದೇಶಕ್ಕಾಗಿ ಬಳಸಲು ಭೂಪರಿವರ್ತನಾ ಆದೇಶ ಮಾಡಿರುವುದು ಕಂಡುಬರುತ್ತದೆ. ಎದುರುದಾರರು 2 ವಿನ್ಯಾಸ ನಕ್ಷೆಗಳನ್ನು ಹಾಜರು ಪಡಿಸಿದ್ದು, ಒಂದು ವಿನ್ಯಾಸ ನಕ್ಷೆಯನ್ನು ದಿ:28-02-2014 ರಂದು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರು ಅನುಮೋದನೆ ಮಾಡಿರುವುದು ಕಂಡುಬರುತ್ತಿಲ್ಲ.

ಎದುರುದಾರರು ಹಾಜರಾಗಿ ತನ್ನ ಹೇಳಿಕೆಯಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರು ನಿವೇಶನದ ವಿನ್ಯಾಸ ನಕ್ಷೆಯನ್ನು ಅನುಮೋದಿಸಿ ಆ ಪ್ರಕಾರ ಖಾತೆಯನ್ನು ನೀಡಲಾಗಿದೆಯೆಂದು ತಿಳಿಸಿರುತ್ತಾರೆ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರು ಅನುಮೋದಿಸಿರುವ ನಕ್ಷೆಗೂ ಹಾಗೂ ಗ್ರಾಮ ಪಂಚಾಯತಿಯವರು ಖಾತಾ ನೀಡಿರುವ ನಕ್ಷೆಗೂ ವ್ಯತ್ಯಾಸವಿದೆ. ನಿವೇಶನವನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರು ನೀಡಿರುವ ಅನುಮೋದಿತ ನಕ್ಷೆಯ ಪ್ರಕಾರ ಮಾಡದೆ ಗ್ರಾಮ ಪಂಚಾಯತಿಯವರು ತಯಾರಿಸಿರುವ ನಕ್ಷೆಯ ಪ್ರಕಾರ ಮಾಡಲಾಗಿದೆಯೆಂದು ಹೇಳಿರುತ್ತಾರೆ ಮತ್ತು ಸದರಿ ಸಂದರ್ಭದಲ್ಲಿ ಎದುರುದಾರರು ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿರುವ ವಿಚಾರವನ್ನು ಕೂಡ ಒಪ್ಪಕೊಂಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಿದಾಗ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರು ನೀಡಿರುವ ಅನುಮೋದಿತ ನಕ್ಷೆಯನ್ನು ಗಣನೆಗೆ ತೆಗೆದುಕೊಳ್ಳದೆ ತಮ್ಮದೇ ಆದ ನಕ್ಷೆಯನ್ನು ತಯಾರಿಸಿ 'ಎ' ಖಾತಾ ನೀಡಿರುವುದು ಎದುರುದಾರರ ಕರ್ತವ್ಯಲೋಪವನ್ನು ತೋರಿಸುತ್ತದೆ. ಆದ್ದರಿಂದ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ.

ಆದುದರಿಂದ, ಎದುರುದಾರರ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಅಥವಾ ಸಮಾಧಾನಕರವಾಗಿರುವುದಿಲ್ಲ ಮತ್ತು ದೂರುದಾರರ ದೂರನ್ನು ಅಲ್ಲಗಳೆಯಲು ಯಾವುದೇ ಸಮಂಜಸ/ಸಮರ್ಪಕ ಉತ್ತರವನ್ನು ತಮ್ಮ ಆಕ್ಷೇಪಣೆಯಲ್ಲಿ ನೀಡಲ್ಲವೆಂಬ ಅಭಿಪ್ರಾಯಕ್ಕೆ ಬಂದಿದೆ.

ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆಯಾದ ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/541/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 13-07-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14 (ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 57 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
6) ಶ್ರೀ ಟಿ.ವಿ.ವೀರಭದ್ರಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬಿದನೂರು ಗ್ರಾಮ ಪಂಚಾಯತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.